ಸಂತೇ ಬಾಚಹಳ್ಳಿ ಜುಟ್ಟನ ಹಳ್ಳಿಯಂಲ್ಲಿ ಕಚ್ಚಾರಸ್ತೆ ಬಗ್ಗೆ

೧೫೯೦. ಶ್ರೀ ಕೃಷ್ಣ, (ಕೃಷ್ಣರಾಜಪೇಟೆ).— ಮಾನ್ಯ ಲೋಕೋಪಯೋಗಿ, ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಮಂತ್ರಿ ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕೃಷ್ಣರಾಜಪೇಟೆ ತಾಲ್ಲೂಕು ಸಂತೇಬಾಚಹಳ್ಳಿ ಮತ್ತು ಚನ್ನರಾಯಪಟ್ಟಣ ತಾಲ್ಲೂಕು ಜುಟ್ಟನಹಳ್ಳಿ ನಡುವೆ ಕಚ್ಚಾ ರಸ್ತೆ ಇದ್ದು ಆಲ್ಲಿ ಸಾರಿಗೆ ಸಂಸ್ಥೆಯ ಬಸ್ ಹಾಗೂ ಇತರ ವಾಹನಗಳು ಓಡಾಡುತ್ತಿರುವುದು ಸರಕಾರದವರ ಗಮನಕ್ಕೆ ಬಂದಿದೆಯೇ ?

ಆ) ಎರಡೂ ಜಿಲ್ಲೆಗಳನ್ನೂ ಕೂಡಿಸುವ ಈ ಅತ್ಯಂತ ಹತ್ತಿರವಾದ ರಸ್ತೆಯನ್ನು ಅಭಿವೃದ್ಧಿ ಪಡಿಸಿ ಡಾಂಬರು ರಸ್ತೆಯನ್ನಾಗಿ ಮಾಡಲಂ ಸರಕಾರದವರು ಕ್ರಮ ತೆಗೆದುಕೊಳ್ಳುವರೇ ?

ಶ್ರೀ ಹೆಚ್. ಡಿ. ದೇವೇಗೌಡ (ಲೋಕೋಪಯೋಗಿ ಮತ್ತು ನೀರಾವರಿ ಸಚಿವರು).—

ಅ) ಹೌದು.

ಆ) ಈ ರಸ್ತೆಯ ಉದ್ದ ೯ ಕಿ. ಮೀ. ಇದ್ದು ಈ ಪೈಕಿ ೨.೨೦ ಕಿ.ಮೀ. ಉದ್ದಕ್ಕೆ ಡಾಂಬರ್ ಹಾಕಲು ೨ ಲಕ್ಷ ರೂಗಳ ಅಂದಾಜು ಪಟ್ಟಿಗೆ ಈ ಸಾಲಿನಲ್ಲಿ ಮಂಜೂರಾತಿ ನೀಡಿದ್ದು ಕಾಮಗಾರಿಯನ್ನು ಪ್ರಾರಂಭಿಸಲಾಗಿದೆ. ರಸ್ತೆಯ ಇನ್ನುಳಿದ ಭಾಗವನ್ನು ಡಾಂಬರ್ ರಸ್ತೆಯನ್ನಾಗಿ ಅಭಿವೃದ್ಧಿ ಪಡಿಸಲು ಸುಮಾರು ೨ ಲಕ್ಷ ರೂಪಾಯಿಗಳು ಬೇಕಾಗುತ್ತದೆ. ಈ ಕೆಲಸವನ್ನು ಹಣಕಾಸಿನ ಲಭ್ಯತೆ ಗನುಗುಣವಾಗಿ ಮುಂಬರುವ ವರ್ಷಗಳಲ್ಲಿ ತೆಗೆದುಕೊಳ್ಳುವುದನ್ನೇ ಪರ್ಯಾಲೋಚಿಸಲಾಗುವುದು.

ಗ್ರಾಮಾಣಾಭಿವೃದ್ಧಿಯಂಲ್ಲಿ ಸ್ನಾತಕೋತ್ತರ ಪದವಿ ಪಡೆದವರಿಗೆ ಉದ್ಯೋಗ ಕೊಡುವ ಬಗ್ಗೆ

೧೪೨೯. ಶ್ರೀ ಯು. ಭೂಪತಿ (ಕಂಡೂರು).— ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಂಗಳೂರು ವಿಶ್ವವಿದ್ಯಾಲಯವು ಗ್ರಾಮೀಣ ಅಭಿವೃದ್ಧಿಗೆ ಸಂಬಂಧಪಟ್ಟಂತೆ ಸ್ನಾತಕೋತ್ತರ ಪದವಿಯನ್ನು ಪ್ರಾರಂಭಿಸಿದ್ದು ರಾಜ್ಯದ ವಿದ್ಯಾರ್ಥಿಗಳಲ್ಲದೇ ಆಸ್ಟ್ರೇಲಿಯಾ ಹಾಗೂ ಇತರ ದೇಶಗಳಿಂದಲೂ ವಿದ್ಯಾರ್ಥಿಗಳು ಬಂದು ಅಭ್ಯಾಸ ಮಾಡುತ್ತಿರುವುದು ಸರಕಾರಕ್ಕೆ ತಿಳಿದಿದೆಯೇ ?

ಆ) ಕಳೆದ ವರ್ಷ ಗ್ರಾಮೀಣ ಅಭಿವೃದ್ಧಿ ಸ್ನಾತಕೋತ್ತರ ಕೇಂದ್ರದ ವಾರ್ಷಿಕೋತ್ಸವ ಸಮಾರಂಭದಲ್ಲಿ ಸಂಬಂಧಪಟ್ಟ ಮಂತ್ರಿಗಳು ಭಾಗವಹಿಸಿ ಗ್ರಾಮೀಣಾಭಿವೃದ್ಧಿಯಲ್ಲಿ ಎಂ ಎ. ಶಿಕ್ಷಣ ಪಡೆದ ವಿದ್ಯಾರ್ಥಿಗಳಿಗೆ ಜಿಲ್ಲಾ ಪರಿಷತ್ ಮಂತ್ತು ಮಂಡಲ ಪಂಚಾಯತ್‌ಗಳಲ್ಲಿ ಉದ್ಯೋಗ ಒದಗಿಸುವ ಆಶ್ವಾಸನೆ ನೀಡಿರಲಿಲ್ಲವೇ ?

ಇ) ಹಾಗಿದ್ದಲ್ಲಿ ಭರವಸೆಯನ್ನು ಜಾರಿಗೆ ತರುವಲ್ಲಿ, ತೆಗೆದುಕೊಂಡಿರುವ ಕ್ರಮಗಳೇನು ?

ಶ್ರೀ ಡಿ. ಮಂಜುನಾಥ್ (ಶಿಕ್ಷಣ ಸಚಿವರು).—

ಅ) ಇಲ್ಲ.

ಆ) ಈ ರೀತಿ ಆಶ್ವಾಸನೆ ಕೊಟ್ಟ ಬಗ್ಗೆ ಸರ್ಕಾರಕ್ಕೆ ತಿಳಿದು ಬಂದಿಲ್ಲ.

ಇ) ಉದ್ಭವಿಸುವುದಿಲ್ಲ.